**All India Radio: Bangalore**
**National Bulletin In Kannada**
**11.08.2025  7.35 pm**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**11.08.2025  7.35 pm**
**<><><><>**

ಮುಖ್ಯಾಂಶಗಳು

೧. ಲೋಕಸಭೆಯಲ್ಲಿಂದು ತೆರಿಗೆ ಕಾನೂನುಗಳ ತಿದ್ದುಪಡಿ ಮಸೂದೆ-೨೦೨೫, ಆದಾಯ ತೆರಿಗೆ ಮಸೂದೆ-೨೦೨೫ ಅಂಗೀಕಾರ

೨. ಮಣಿಪುರ ಬಜೆಟ್, ಮಣಿಪುರ ಸರಕು ಮತ್ತು ಸೇವಾ ತೆರಿಗೆ ತಿದ್ದುಪಡಿ ಮಸೂದೆಗೆ ಸಂಸತ್ತು ಅನುಮೋದನೆ

೩. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ: ದೇಶದ ೩೫ ಲಕ್ಷ ರೈತರಿಗೆ ೩ ಸಾವಿರದ ೯೦೦ ಕೋಟಿ ರೂಪಾಯಿ ವರ್ಗಾವಣೆ

೪. ವಿಶ್ವ ಕ್ರೀಡಾಕೂಟ: ಮಹಿಳೆಯರ ಸಾಂಡಾ ೫೨ ಕೆಜಿ ವುಶು ವಿಭಾಗದಲ್ಲಿ ಫೈನಲ್ ಪ್ರವೇಶಿಸಿದ ಭಾರತದ ನಮ್ರುತಾ ಬಾತ್ರಾ

><><><><><><><><

ಲೋಕಸಭೆಯು ತೆರಿಗೆ ಕಾನೂನುಗಳು ತಿದ್ದುಪಡಿ ಮಸೂದೆ-೨೦೨೫ ಮತ್ತು ಆದಾಯ ತೆರಿಗೆ ಮಸೂದೆ -೨೦೨೫ ಅನ್ನು ಇಂದು ಧ್ವನಿ ಮತದಿಂದ ಅಂಗೀಕರಿಸಿದೆ. ಬಿಹಾರದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಮತ್ತು ಇತರೆ ವಿಷಯಗಳ ಕುರಿತು ವಿರೋಧ ಪಕ್ಷದ ಸದಸ್ಯರ ಪ್ರತಿಭಟನೆಯ ನಡುವೆಯೂ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಈ ವಿಧೇಯಕಗಳನ್ನು ಮಂಡಿಸಿದರು. ಆದಾಯ ತೆರಿಗೆ ಮಸೂದೆ-೨೦೨೫, ಆದಾಯ ತೆರಿಗೆಗೆ ಸಂಬಂಧಿಸಿದ ಕಾನೂನನ್ನು ಕ್ರೋಢೀಕರಿಸಲು ಮತ್ತು ತಿದ್ದುಪಡಿ ಮಾಡಲು ಉದ್ದೇಶಿಸಲಾಗಿದೆ. ಆದರೆ ತೆರಿಗೆ ಕಾನೂನುಗಳು ತಿದ್ದುಪಡಿ ಮಸೂದೆ-೨೦೨೫, ಆದಾಯ ತೆರಿಗೆ ಕಾಯ್ದೆ-೧೯೬೧ ಅನ್ನು ಮತ್ತಷ್ಟು ತಿದ್ದುಪಡಿ ಮಾಡುತ್ತದೆ ಹಾಗೂ ಹಣಕಾಸು ಕಾಯ್ದೆ-೨೦೨೫ ಅನ್ನು ತಿದ್ದುಪಡಿ ಮಾಡುತ್ತದೆ.

><><><><><><><><

ಲೋಕಸಭೆಯು ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ-೨೦೨೫ ಮತ್ತು ರಾಷ್ಟ್ರೀಯ ಡೋಪಿಂಗ್ ವಿರೋಧಿ ತಿದ್ದುಪಡಿ ಮಸೂದೆ-೨೦೨೫ ಅನ್ನು ಅಂಗೀಕರಿಸಿತು. ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆಯು ರಾಷ್ಟ್ರೀಯ ಕ್ರೀಡಾ ಸಂಸ್ಥೆಗಳ ಮಾನ್ಯತೆ ಮತ್ತು ಅವುಗಳ ಕಾರ್ಯನಿರ್ವಹಣೆಯನ್ನು ನಿಯಂತ್ರಿಸಲು ಪ್ರಯತ್ನಿಸುತ್ತದೆ. ಪ್ರತಿ ಗೊತ್ತುಪಡಿಸಿದ ಕ್ರೀಡೆಗೆ ರಾಷ್ಟ್ರೀಯ ಒಲಿಂಪಿಕ್ ಸಮಿತಿ, ರಾಷ್ಟ್ರೀಯ ಪ್ಯಾರಾಲಿಂಪಿಕ್ ಸಮಿತಿ ಹಾಗೂ ರಾಷ್ಟ್ರೀಯ ಮತ್ತು ಪ್ರಾದೇಶಿಕ ಕ್ರೀಡಾ ಒಕ್ಕೂಟಗಳ ಸ್ಥಾಪನೆಗೆ ಮಸೂದೆ ಅವಕಾಶ ನೀಡುತ್ತದೆ. ರಾಷ್ಟ್ರೀಯ ಸಂಸ್ಥೆಗಳು ಆಯಾ ಅಂತಾರಾಷ್ಟ್ರೀಯ ಸಂಸ್ಥೆಗಳೊಂದಿಗೆ ಸಂಬಂಧ ಹೊಂದಿರುತ್ತವೆ. ಪ್ರತಿ ರಾಷ್ಟ್ರೀಯ ಕ್ರೀಡಾ ಸಂಸ್ಥೆಯು ಪ್ರತಿ

ಅಂಗಸಂಸ್ಥೆ ಸದಸ್ಯರಿಂದ ಸಮಾನ ಸಂಖ್ಯೆಯ ಪ್ರತಿನಿಧಿಗಳು ಮತ್ತು ಕೆಲವು ಪದನಿಮಿತ್ತ ಸದಸ್ಯರನ್ನು ಒಳಗೊಂಡಿರುವ ಸಾಮಾನ್ಯ ಮಂಡಳಿಯನ್ನು ಹೊಂದಿರುತ್ತದೆ. ಇದು ಕನಿಷ್ಠ ಇಬ್ಬರು ಅತ್ಯುತ್ತಮ ಕ್ರೀಡಾಪಟುಗಳು ಮತ್ತು ನಾಲ್ವರು ಮಹಿಳೆಯರನ್ನು ಹೊಂದಿರುವ ೧೫ ಸದಸ್ಯರನ್ನು ಒಳಗೊಂಡ ಕಾರ್ಯಕಾರಿ ಸಮಿತಿಯನ್ನು ಹೊಂದಿರುತ್ತದೆ. ಮಸೂದೆಯು ಕೇಂದ್ರ ಸರ್ಕಾರಕ್ಕೆ ರಾಷ್ಟ್ರೀಯ ಕ್ರೀಡಾ ಮಂಡಳಿಯನ್ನು ಸ್ಥಾಪಿಸಲು ಅಧಿಕಾರ ನೀಡುತ್ತದೆ. ಅದು ರಾಷ್ಟ್ರೀಯ ಕ್ರೀಡಾ ಸಂಸ್ಥೆಗಳಿಗೆ ಮಾನ್ಯತೆ ನೀಡುತ್ತದೆ ಮತ್ತು ಅವುಗಳ ಅಂಗಸಂಸ್ಥೆಗಳನ್ನು ನೋಂದಾಯಿಸುತ್ತದೆ. ಕ್ರೀಡೆಗೆ ಸಂಬಂಧಿಸಿದ ವಿವಾದಗಳನ್ನು ನಿರ್ಣಯಿಸಲು ರಾಷ್ಟ್ರೀಯ ಕ್ರೀಡಾ ನ್ಯಾಯಮಂಡಳಿಯನ್ನು ರಚಿಸುವುದಕ್ಕೂ ಮಸೂದೆ ಅವಕಾಶ ನೀಡುತ್ತದೆ. ರಾಷ್ಟ್ರೀಯ ಡೋಪಿಂಗ್ ವಿರೋಧಿ ತಿದ್ದುಪಡಿ ಮಸೂದೆ-೨೦೨೫, ರಾಷ್ಟ್ರೀಯ ಡೋಪಿಂಗ್ ವಿರೋಧಿ ಕಾಯ್ದೆ ೨೦೨೨ ಕ್ಕೆ ತಿದ್ದುಪಡಿ ತರಲು ಪ್ರಯತ್ನಿಸುತ್ತದೆ. ಈ ಕಾಯ್ದೆಯು ಕ್ರೀಡೆಗಳಲ್ಲಿ ಡೋಪಿಂಗ್ ವಿರುದ್ಧದ ಯುನೆಸ್ಕೋ ಸಮಾವೇಶವನ್ನು ಜಾರಿಗೆ ತರುತ್ತದೆ. ಇದು ಕ್ರೀಡೆಗಳಲ್ಲಿ ಡೋಪಿಂಗ್ ಅನ್ನು ನಿಷೇಧಿಸುತ್ತದೆ ಮತ್ತು ಉಲ್ಲಂಘನೆಗಳ ಪರೀಕ್ಷೆ, ಜಾರಿ ಮತ್ತು ತೀರ್ಪುಗಾಗಿ ಒಂದು ಚೌಕಟ್ಟನ್ನು ಒದಗಿಸುತ್ತದೆ. ಇದು ಡೋಪಿಂಗ್ ವಿರೋಧಿ ನಿಯಮಗಳನ್ನು ಜಾರಿಗೆ ತರಲು ರಾಷ್ಟ್ರೀಯ ಡೋಪಿಂಗ್ ವಿರೋಧಿ ಸಂಸ್ಥೆ ಅನ್ನು ಸ್ಥಾಪಿಸುತ್ತದೆ. ಇದು ನಾಡಾದ ಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡಲು ಮತ್ತು ಡೋಪಿಂಗ್ ವಿರೋಧಿ ನಿಯಮಗಳ ಕುರಿತು ಕೇಂದ್ರ ಸರ್ಕಾರಕ್ಕೆ ಸಲಹೆ ನೀಡಲು ಕ್ರೀಡೆಗಳಲ್ಲಿ ಡೋಪಿಂಗ್ ವಿರೋಧಿ ರಾಷ್ಟ್ರೀಯ ಮಂಡಳಿಯನ್ನು ಸಹ ಸ್ಥಾಪಿಸುತ್ತದೆ.

><><><><><><><><

ಸಂಸತ್ತು ೨೦೨೫-೨೬ರ ಮಣಿಪುರ ಬಜೆಟ್, ೨೦೨೫ರ ಮಣಿಪುರ ಸರಕು ಮತ್ತು ಸೇವಾ ತೆರಿಗೆ ತಿದ್ದುಪಡಿ ಮಸೂದೆ ಮತ್ತು ೨೦೨೫ರ ಮಣಿಪುರ ವಿನಿಯೋಗ ಮಸೂದೆಗಳಿಗೆ ಅನುಮೋದನೆ ನೀಡಿದೆ. ರಾಜ್ಯಸಭೆಯಲ್ಲಿ ಈ ಮಸೂದೆಗಳ ಕುರಿತು ನಡೆದ ಸಂಕ್ಷಿಪ್ತ ಚರ್ಚೆಗೆ ಉತ್ತರಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಮಣಿಪುರಕ್ಕೆ ಬಜೆಟ್ ನಿರ್ಣಾಯಕವಾಗಿದೆ. ಏಕೆಂದರೆ ಇದು ಪೂರ್ಣ ಬಜೆಟ್ ಆಗಿದೆ ಮತ್ತು ಈ ಬಜೆಟ್‌ನ ಅಂಗೀಕಾರ ಎಲ್ಲರ ಸಾಂವಿಧಾನಿಕ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಆದರೆ ವಿರೋಧ ಪಕ್ಷಗಳು ಅಂತಹ ಪ್ರಮುಖ ವಿಷಯಗಳ ಬಗ್ಗೆ ಸಹಕರಿಸುತ್ತಿಲ್ಲ. ಅವರು ಇತರೆ ವಿಷಯಗಳನ್ನು ಎತ್ತುವ ಮೂಲಕ ರಾಜಕೀಯ ಲಾಭ ಪಡೆಯುವಲ್ಲಿ ನಿರತರಾಗಿದ್ದಾರೆ ಎಂದು ಅವರು ದೂರಿದರು. ಇದಕ್ಕೂ ಮೊದಲು, ಚರ್ಚೆಯಲ್ಲಿ ಭಾಗವಹಿಸಿದ ಬಿಜೆಪಿಯ ಮಹಾರಾಜ ಸನಜೋಬಾ ಲೀಶೆಂಬಾ, ಸರ್ಕಾರ ಮಣಿಪುರಕ್ಕೆ ಒಟ್ಟು ೩೦ ಸಾವಿರ ೯೦೦ ಕೋಟಿ ರೂಪಾಯಿಗಳನ್ನು ನಿಗದಿಪಡಿಸಿದೆ. ಮಣಿಪುರದಲ್ಲಿ ವಿಶ್ವಾಸ ಮತ್ತು ಸ್ಥಿರತೆಯನ್ನು ಪುನಃಸ್ಥಾಪಿಸುವ ಗುರಿಯನ್ನು ಈ ಬಜೆಟ್ ಹೊಂದಿದೆ. ಜೊತೆಗೆ ರಾಜ್ಯದ ಆರ್ಥಿಕತೆಯನ್ನು ಸ್ಥಿರಗೊಳಿಸುವತ್ತ ಗಮನ ಹರಿಸಲಾಗಿದೆ ಎಂದು ಅವರು ಹೇಳಿದರು. ಇನ್ನೊಂದೆಡೆ, ಉಭಯ ಸದನಗಳ ಕಲಾಪವನ್ನು ನಾಳೆಗೆ ಮುಂದೂಡಲಾಗಿದೆ.

><><><><><><><><

ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸೀಮ್ ಮುನೀರ್ ಅವರ ಸಂಭಾವ್ಯ ಪರಮಾಣು ಬೆದರಿಕೆಯ ಹೇಳಿಕೆಯನ್ನು ಭಾರತ ತೀವ್ರವಾಗಿ ಖಂಡಿಸಿದೆ. ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಮಾತನಾಡಿ,

ಭಾರತವು ಯಾವುದೇ ಪರಮಾಣು ಬೆದರಿಕೆಗೆ ಮಣಿಯುವುದಿಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಿದೆ. ಭಾರತ ತನ್ನ ರಾಷ್ಟ್ರೀಯ ಭದ್ರತೆಯನ್ನು ಕಾಪಾಡಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದನ್ನು ಮುಂದುವರಿಸುತ್ತದೆ ಎಂದು ಅವರು ಹೇಳಿದರು.

><><><><><><><><

ಬಿಹಾರದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಕಳೆದ ಲೋಕಸಭಾ ಚುನಾವಣೆಯಲ್ಲಿ ಮತಗಳ್ಳತನದ ವಿರುದ್ಧದ ಪ್ರತಿಭಟನೆಯ ಭಾಗವಾಗಿ ಇಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಮತ್ತು ಕಾಂಗ್ರೆಸ್ ಸಂಸದೆ ಪ್ರಿಯಾಂಕ ಗಾಂಧಿ ವಾದ್ರಾ ಸೇರಿದಂತೆ ಐಎನ್‌ಡಿಐ ಮೈತ್ರಿಕೂಟದ ನಾಯಕರು ಸಂಸತ್ ಭವನದಿಂದ ಭಾರತೀಯ ಚುನಾವಣಾ ಆಯೋಗದ ಪ್ರಧಾನ ಕಚೇರಿಯವರೆಗೆ ಪ್ರತಿಭಟನಾ ಪಾದಯಾತ್ರೆ ನಡೆಸಿದರು. ಪಾದಯಾತ್ರೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅಖಿಲೇಶ್ ಯಾದವ್, ಚುನಾವಣಾ ಆಯೋಗದ ವಿರುದ್ಧ ಆರೋಪ ಕೇಳಿಬರುತ್ತಿರುವುದು ಇದೇ ಮೊದಲ ಬಾರಿ ಅಲ್ಲ. ಕರ್ನಾಟಕದಲ್ಲಿ ಮತಗಳ್ಳತನದಲ್ಲಿ ತೊಡಗಿರುವ ಅಧಿಕಾರಿಗಳ ವಿರುದ್ಧ ಚುನಾವಣಾ ಆಯೋಗ ಕ್ರಮ ಕೈಗೊಂಡಿಲ್ಲವೇಕೆ ಎಂದು ಪ್ರಶ್ನಿಸಿದರು.

><><><><><><><><

ಚುನಾವಣಾ ಆಯೋಗ ಮತ್ತು ಸುಪ್ರೀಂ ಕೋರ್ಟ್‌ನಂತಹ ಸಾಂವಿಧಾನಿಕ ಸಂಸ್ಥೆಗಳ ಪ್ರತಿಷ್ಠೆಯನ್ನು ಪ್ರತಿಪಕ್ಷಗಳು ಹಾಳು ಮಾಡುತ್ತಿವೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಆರೋಪಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಚುನಾವಣಾ ಆಯೋಗವು ೩೦ ವಿರೋಧ ಪಕ್ಷದ ಸಂಸದರಿಗೆ ತಮ್ಮ ಮನವಿಯನ್ನು ಸಲ್ಲಿಸಲು ಚುನಾವಣಾ ಸಮಿತಿಯನ್ನು ಭೇಟಿ ಮಾಡಲು ಅನುಮತಿ ನೀಡಿದೆ. ಆದರೆ ಅವರು ಅದಕ್ಕೆ ಒಪ್ಪಲಿಲ್ಲ. ಅಲ್ಲದೇ ಪ್ರತಿಭಟನಾನಿರತ ಎಲ್ಲಾ ಸಂಸದರನ್ನು ಚುನಾವಣಾ ಸಮಿತಿ ಭೇಟಿ ಮಾಡುವಂತೆ ಒತ್ತಾಯಿಸಿದರು ಎಂದು ಹೇಳಿದರು.

><><><><><><><><

ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ದೇಶದ ೩೫ ಲಕ್ಷಕ್ಕೂ ಹೆಚ್ಚು ರೈತರಿಗೆ ಕ್ಲೇಮ್ ಪಾವತಿಯಾಗಿ ೩ ಸಾವಿರದ ೯೦೦ ಕೋಟಿ ರೂಪಾಯಿಗಳನ್ನು ಡಿಬಿಟಿ ಮೂಲಕ ವರ್ಗಾಯಿಸಲಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ರಾಜಸ್ಥಾನದ ಜುನ್ಜುನುವಿನಲ್ಲಿ ಇಂದು ಆಯೋಜಿಸಲಾದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ೨೦೧೬ರಿಂದ ಇಲ್ಲಿಯವರೆಗೆ ದೇಶದ ರೈತರು ೨ ಲಕ್ಷ ೧೨ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ಮೊತ್ತವನ್ನು ಬೆಳೆ ವಿಮಾ ಹಕ್ಕು ರೂಪದಲ್ಲಿ ಪಡೆದಿದ್ದಾರೆ ಎಂದು ಹೇಳಿದರು. ರೈತರ ಆದಾಯವನ್ನು ಹೆಚ್ಚಿಸುವ ಮೂಲಕ ಅವರನ್ನು ಸಮೃದ್ಧಗೊಳಿಸಲು ಕೇಂದ್ರ ಸರ್ಕಾರ ನಿರಂತರವಾಗಿ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದೆ. ಕಳಪೆ ಗುಣಮಟ್ಟದ ರಸಗೊಬ್ಬರಗಳು ಮತ್ತು ಬೀಜಗಳನ್ನು ಮಾರಾಟ ಮಾಡುವವರನ್ನು ಸುಮ್ಮನೆ ಬಿಡುವುದಿಲ್ಲ ಎಂದು ಅವರು ಎಚ್ಚರಿಸಿದರು. ಕಳಪೆ ಗುಣಮಟ್ಟದ ರಸಗೊಬ್ಬರಗಳು ಮತ್ತು ಬೀಜಗಳನ್ನು ತಯಾರಿಸುವ ಹಾಗೂ ಮಾರಾಟ

ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಶೀಘ್ರದಲ್ಲೇ ಹೊಸ ಕಾನೂನನ್ನು ತರಲು ಸಿದ್ಧತೆಗಳು ನಡೆಯುತ್ತಿವೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

><><><><><><><><><

ಚೀನಾದ ಚೆಂಗ್ದುವಿನಲ್ಲಿ ಇಂದು ನಡೆದ ೨೦೨೫ ರ ವಿಶ್ವ ಕ್ರೀಡಾಕೂಟದಲ್ಲಿ ಭಾರತದ ನಮ್ರತಾ ಬಾತ್ರಾ, ಮಹಿಳೆಯರ ಸಾಂಡಾ ೫೨ ಕೆಜಿ ವುಶು ವಿಭಾಗದಲ್ಲಿ ಫೈನಲ್ ತಲುಪುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ. ನಮ್ರತಾ ಅವರು, ಫಿಲಿಪೈನ್ಸ್‌ನ ಕ್ರಿಜಾನ್ ಫೇತ್ ಕೊಲ್ಲಾಡೊ ಅವರನ್ನು ೨-೦ ಅಂತರದಿಂದ ಸೋಲಿಸಿ ಭಾರತಕ್ಕೆ ವುಶು ಕ್ರೀಡೆಯಲ್ಲಿ ಮೊದಲ ವಿಶ್ವ ಕ್ರೀಡಾಕೂಟದ ಪದಕವನ್ನು ಖಚಿತಪಡಿಸಿದರು. ಫೈನಲ್‌ನಲ್ಲಿ ಅವರು ಪೀಪಲ್ಸ್ ರಿಪಬ್ಲಿಕ್ ಆಫ್ ಚೀನಾದ ಮೆಂಗ್ಯು ಚೆನ್ ವಿರುದ್ಧ ಸೆಣಸಲಿದ್ದಾರೆ. ಇದಕ್ಕೂ ಮೊದಲು, ಪುರುಷರ ಸಂಯುಕ್ತ ಬಿಲ್ಲುಗಾರಿಕೆ ಸ್ಪರ್ಧೆಯಲ್ಲಿ ರಿಷಭ್ ಯಾದವ್, ಕಂಚಿನ ಪದಕವನ್ನು ಗೆಲ್ಲುವ ಮೂಲಕ ಈ ಕ್ರೀಡಾಕೂಟದಲ್ಲಿ ಭಾರತಕ್ಕೆ ಮೊದಲ ಪದಕ ತಂದುಕೊಟ್ಟರು.

><><><><><><><><><

ಭಾರತ್ ಸಂಚಾರ್ ನಿಗಮ್ ಲಿಮಿಟೆಡ್-ಬಿಎಸ್‌ಎನ್‌ಎಲ್ ಮತ್ತು ಪ್ರಮುಖ ಜಾಗತಿಕ ತಂತ್ರಜ್ಞಾನ ಕಂಪನಿಗಳ ನಡುವಿನ ಸಹಯೋಗವು ಕೌಶಲ್ಯಪೂರ್ಣ ಹಾಗೂ ಭವಿಷ್ಯಕ್ಕೆ ಸಿದ್ಧವಾಗಿರುವ ದೂರಸಂಪರ್ಕ ಕಾರ್ಯಪಡೆಯನ್ನು ನಿರ್ಮಿಸುವಲ್ಲಿ ಒಂದು ಹೆಗ್ಗುರುತಾಗಿದೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಡಿಜಿಟಲ್ ಕೌಶಲ್ಯ ಉಪಕ್ರಮಗಳಿಗಾಗಿ ಬಿಎಸ್‌ಎನ್‌ಎಲ್ ಹಾಗೂ ಎರಿಕ್ಸನ್, ಕ್ವಾಲ್ಕಾಮ್, ಸಿಸ್ಕೊ ಮತ್ತು ನೋಕಿಯಾ ಸೇರಿದಂತೆ ನಾಲ್ಕು ಪ್ರಮುಖ ಜಾಗತಿಕ ತಂತ್ರಜ್ಞಾನ ಕಂಪನಿಗಳ ನಡುವೆ ಸಹಿ ಮಾಡಲಾದ ಒಪ್ಪಂದಗಳನ್ನು ಸಚಿವರು ಅನಾವರಣಗೊಳಿಸಿದರು.

><><><><><><><><><